1	2	3
17.	ಚಿತ್ರದುರ್ಗ	1,78,63,150-00
18.	ದಾವಣಗೆರೆ	3,47,23,571-76
19.	ಉತ್ತರ ಕನ್ನಡ	2,95,51,904-00
20.	ಬೆಳಗಾಂ	22,02,40,341-00
21.	ಬಿಜಾಪುರ	1,09,47,446-00
22.	ಬಾಗಲಕೋಟೆ	1,28,87,580-00
23.	ಗುಲ್ಬರ್ಗಾ	15,05,52,291-00
24.	ಬೀದರ್	22,59,69,410-00
25.	ರಾಯಚೂರು	74,51,529-00
26.	ಕೊಪ್ಪಳ	81,81,279-00
27.	ಬಳ್ಳಾರಿ	8,94,57,546-00

ಆ) 3 ತಿಂಗಳ ಠೇವಣಿ ಮೊತ್ತವು 120 ಗಳಿಗಿಂತ ಹೆಚ್ಚಾಗಿದ್ದಲ್ಲಿ ಹೆಚ್ಚುವರಿ ಠೇವಣಿ ಮೊತ್ತವನ್ನು ಹಿಂದಿರುಗಿಸುವಂತೆ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗವು ನಿರ್ದೇಶಿಸಿದೆ.

ಈ) ಈ ಬಗ್ಗೆ ಗ್ರಾಹಕರಿಂದ ಮನವಿ ಬಂದ ನಂತರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ರಾಜ್ಯದಲ್ಲಿ "ಡಿ" ದರ್ಜೆ ನೌಕರರ ನೇಮಕಾತಿ

352(641) - ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಲಕ್ಷ್ಮಯ್ಯ) (ತುರುವೇಕೆರೆ): ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅನೇಕ ಸಾವಿರ 'ಡಿ' ಗುಂಪಿನ ಹುದ್ದೆಗಳು ಖಾಲಿ ಇರುವುದು ಸರ್ಕಾರಕ್ಕೆ ಗೊತ್ತಿದೆಯೇ;

ಆ) ಎಷ್ಟು ವರ್ಷಗಳಿಂದ ಈ ವರ್ಗದ ನೌಕರರನ್ನು ನೇಮಿಸಿಲ್ಲ, ಕಾರಣವೇನು;

ಇ) 'ಡಿ' ಗುಂಪಿನ ನೌಕರರು ಇಲ್ಲದೇ ಸರ್ಕಾರಿ ಕಛೇರಿಗಳು ಹಾಗೂ ಅನೇಕ ಸಂಸ್ಥೆಗಳಲ್ಲಿ ಕೆಲಸ ಮಾಡಲು ತೊಂದರೆಯಾಗುತ್ತಿಲ್ಲವೆ;

ಈ) ಹಾಗಿದ್ದಲ್ಲಿ ನೇಮಕಾತಿ ಮಾಡಿಕೊಳ್ಳಲು ಇರುವ ತೊಂದರೆ ಏನು;

ಉ) ಸರ್ಕಾರಕ್ಕೆ ಆರ್ಥಿಕ ಮುಗ್ಗಟ್ಟಿನಿಂದ ನೇಮಕಾತಿ ಸಾಧ್ಯವಿಲ್ಲವೆ?

ಶ್ರೀ ಎಸ್.ಎಂ. ಕೃಷ್ಣ (ಮಾನ್ಯ ಮುಖ್ಯಮಂತ್ರಿಯವರು):

ಅ) ಗೊತ್ತಿದೆ.

ಆ) ಕೆಲವು ವರ್ಷಗಳಿಂದ ಹುದ್ದೆಗಳು ಖಾಲಿ ಇವೆ. ಯೋಜನೇತರ ವೆಚ್ಚವನ್ನು ಆದಷ್ಟು ಕಡಿತಗೊಳಿಸುವ ಉದ್ದೇಶದಿಂದ ಮಿತವ್ಯಯ ಆದೇಶಗಳನ್ನು ಜಾರಿಗೊಳಿಸಲಾಗಿದೆ. ಇದಲ್ಲದೇ ಖಾಲಿ ಇರುವ ಅನಾವಶ್ಯಕ ಹುದ್ದೆಗಳನ್ನು ರದ್ದುಪಡಿಸುವ ಬಗ್ಗೆ ಪರಿಶೀಲನೆ ನಡೆಯುತ್ತಿದೆ. ಆದುದರಿಂದ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಈಗಲೇ ಭರ್ತಿ ಮಾಡಲು ಬರುವುದಿಲ್ಲ.

ಇ) ಸುಮಾರು 75,000 ಕ್ಕೂ ಹೆಚ್ಚು 'ಡಿ' ಗುಂಪಿನ ನೌಕರರು ರಾಜ್ಯದ ವಿವಿಧ ಇಲಾಖೆಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ.

ಈ) ಮೇಲಿನ ಐಟಂ 'ಇ' ಗೆ ನೀಡಿರುವ ಉತ್ತರದಿಂದಾಗಿ ಇದು ಉದ್ಭವಿಸುವುದಿಲ್ಲ.

ಉ) ಈಗಾಗಲೇ ಮೇಲೆ ಹೇಳಿದಂತೆ ಮಿತವ್ಯಯ ಆದೇಶಗಳು ಜಾರಿಯಲ್ಲಿವೆ.

ರಾಜ್ಯದಲ್ಲಿ ಗೆಜೆಟೆಡ್ ಪ್ರೊಬೇಷನರ್ ಹುದ್ದೆಗಳು

353(643) - ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ತುರುವೇಕೆರೆ): ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರವು ಗೆಜೆಟೆಡ್ ಪ್ರೋಬೇಷನರ್ ಹುದ್ದೆಯ ನೇಮಕಾತಿಗೆ ಸಂಬಂಧಪಟ್ಟಂತೆ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಿದ್ದು ಯಾವಾಗ;

ಆ) ನೇಮಕಾತಿ ಕೋರಿ ಎಷ್ಟು ಜನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು; ಎಷ್ಟು ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು;

ಇ) ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿದೆಯೇ; ಇಲ್ಲದೇ ಇದ್ದಲ್ಲಿ ಕಾರಣಗಳೇನು;

ಈ) ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿ ಕುರಿತಂತೆ ಸರ್ಕಾರದ ನಿಲುವೇನು?

ಶ್ರೀ ಎಸ್.ಎಂ. ಕೃಷ್ಣ (ಮಾನ್ಯ ಮುಖ್ಯಮಂತ್ರಿಯವರು):

ಅ) ಕರ್ನಾಟಕ ಲೋಕ ಸೇವಾ ಆಯೋಗವು ತನ್ನ ದಿನಾಂಕ 9-3-1998 ಮತ್ತು ದಿನಾಂಕ 15-12-1999ರ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯನ್ನು ಪ್ರಾರಂಭಿಸಿದೆ.

ಆ) 1998ನೇ ಸಾಲಿನ ಆಯ್ಕೆಗೆ ಸಂಬಂಧಿಸಿದಂತೆ 85,598 ಅಭ್ಯರ್ಥಿಗಳು ಆಯ್ಕೆಗಾಗಿ ಅರ್ಜಿ ಸಲ್ಲಿಸಿದ್ದು, ಆ ಪೈಕಿ 58,112 ಅಭ್ಯರ್ಥಿಗಳು ಪೂರ್ವಭಾವಿ ಪರೀಕ್ಷೆಗೆ ಹಾಜರಾಗಿದ್ದರು ಮತ್ತು 8,195 ಅಭ್ಯರ್ಥಿಗಳು ಮುಖ್ಯ ಪರೀಕ್ಷೆಗೆ ಹಾಜರಾಗಿದ್ದರು. 1999ನೇ ಸಾಲಿನ ಆಯ್ಕೆಗೆ ಸಂಬಂಧಿಸಿದಂತೆ 75,055 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದು, ಆ ಪೈಕಿ 56,228 ಅಭ್ಯರ್ಥಿಗಳು ಪೂರ್ವಭಾವಿ ಪರೀಕ್ಷೆಗೆ ಹಾಜರಾಗಿರುತ್ತಾರೆ.